# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1188

ಸದಸ್ಯರ ಹೆಸರು : ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 15.12.2023

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆ ಹೊಂದಿರುವ ಗ್ರಾಮ ಪಂಚಾಯಿತಿಗಳ ಒಟ್ಟು ಸಂಖ್ಯೆ ಎಷ್ಟು;</td><td>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯತಿಗಳಿಗೆ ಮಂಜೂರಾದ, ಭರ್ತಿಯಾದ ಮತ್ತು ಪ್ರಸ್ತುತ ಖಾಲಿಯಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ವಿವರ ಈ ಕೆಳಕಂಡಂತಿದೆ.<br><table><tr><th>ಮಂಜೂರಾದ ಹುದ್ದೆಗಳ ಸಂಖ್ಯೆ</th><th>ಭರ್ತಿಯಾದ ಹುದ್ದೆಗಳ ಸಂಖ್ಯೆ</th><th>ಖಾಲಿ ಇರುವ ಹುದ್ದೆಗಳ ಸಂಖ್ಯೆ</th></tr><tr><td>6021</td><td>5189</td><td>832</td></tr></table></td></tr>
<tr><td>(ಆ)</td><td>ಖಾಲಿ ಇರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಹಾಗೂ ಪದೋನ್ನತಿ ಮಾನದಂಡದಡಿ ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?</td><td>ನೇರ ನೇಮಕಾತಿ ಕೋಟಾದಡಿ ಖಾಲಿಯಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ 256 ಹುದ್ದೆಗಳು, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ವೃಂದದ 220 ಹುದ್ದೆಗಳು, ಗ್ರಾಮ ಪಂಚಾಯತಿ ಕಾರ್ಯದರ್ಶೀ ಗ್ರೇಡ್-2 ವೃಂದದ 343 ಹುದ್ದೆಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ 105 ಹುದ್ದೆಗಳಿಗೆ ನೇಮಕಾತಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.<br><br>ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ನೀಡಲು ಕ್ರಮ ವಹಿಸಲಾಗುತ್ತಿದೆ.</td></tr>
</table>

| | | |
|---|---|---|
| (ಇ) | ಗ್ರಾಮ ಪಂಚಾಯಿತಿಗಳಲ್ಲಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಎಕ್ಸಿಕ್ಯೂಟೀವ್ ಸಿಬ್ಬಂದಿಗಳಾಗಿದ್ದು, ಇವರ ಸೇವೆ ಗ್ರಾಮ ಪಂಚಾಯಿತಿ ಪರಿಮಿತಿಯಲ್ಲಿಡದೆ ಆಗ್ಗಿಂದಾಗ್ಗೆ ಸರ್ಕಾರ ಅಧಿಸೂಚನೆಗಳನ್ನು ಹೊರಡಿಸಿ ಇವರು ಸಚಿವಾಲಯಗಳಲ್ಲಿ, ಮಾನ್ಯ ಸಚಿವರುಗಳ ಹಾಗೂ ಮಾನ್ಯ ಶಾಸಕರುಗಳ ಆಪ್ತ ಶಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದರಿಂದ ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಸರ್ಕಾರದ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಖಾಲಿ ಇರುವ ಗ್ರಾಮ ಪಂಚಾಯಿತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಸಮೀಪದಲ್ಲಿರುವ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ/ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ನೌಕರರಿಗೆ ಅಧಿಕ ಪ್ರಭಾರ ವಹಿಸಲು ನಿರ್ದೇಶನ ನೀಡಲಾಗಿದೆ. |
| (ಈ) | ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಎಕ್ಸಿಕ್ಯೂಟೀವ್ ಸಿಬ್ಬಂದಿ ಆಗಿರುವುದರಿಂದ ಗ್ರಾಮ ಪಂಚಾಯಿತಿಯಲ್ಲಿಯೇ ಕರ್ತವ್ಯ ನಿರ್ವಹಿಸುವುದು ಸೂಕ್ತವಾಗಿದ್ದು ಸರ್ಕಾರ ಈ ಬಗ್ಗೆ ಗಮನ ಹರಿಸುವುದೇ? | ಈ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಗ್ರಾಅಪ 646 ಗ್ರಾಪಂಅ 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.